ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 5–9–2017

## ಪತ್ರಿಕಾ ಆಮಂತ್ರಣ

1. ಅಡಕೆಯ ಸಹಕಾರ ಮಾರಾಟ ವ್ಯವಸ್ಥೆಯನ್ನು ಸದೃಢಗೊಳಿಸುವ ತರಬೇತಿ ಕಾರ್ಯಾಗಾರ

ಉದ್ಘಾಟನೆ:

ಎಸ್. ಎಸ್. ಮಲ್ಲಿಕಾರ್ಜುನ, ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು.

ಪ್ರಾಸ್ತಾವಿಕ ಭಾಷಣ:

ಡಾ. ಟಿ.ಎನ್. ಪ್ರಕಾಶ್ ಕಮ್ಮರಡಿ, ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷರು.

ದಿನಾಂಕ: 6–09–2017, ಬುಧವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಭಾರತೀಯ ತೋಟಗಾರಿಕಾ ವ್ಯವಸ್ಥಾಪಕ ಸಂಸ್ಥೆ, ಜ್ಞಾನಭಾರತಿ ಕ್ಯಾಂಪಸ್, ಅಂಬೇಡ್ಕರ್ ಕಾಲೇಜ್ ಹತ್ತಿರ, ಮಲ್ಲತ್ತಳ್ಳಿ ಪೋಸ್ಟ್, ನಾಗರಭಾವಿ, ಬೆಂಗಳೂರು.

2. ಬ್ರಹ್ಮಶ್ರೀ ನಾರಾಯಣಗುರು ಜಯಂತಿ:

ಉದ್ಘಾಟನೆ:

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಅಧ್ಯಕ್ಷತೆ:

ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರ.

ದಿನಾಂಕ: 06–09–2017, ಬುಧವಾರ, ಸಂಜೆ 6–00 ಗಂಟೆಗೆ.

ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

ಸಂಖ್ಯೆ 21/147

# ಪ್ರತಿಯೊಬ್ಬ ವ್ಯಕ್ತಿಯ ವಿಕಾಸಕ್ಕೆ ಓರ್ವ ಗುರು ಮತ್ತು ಗುರಿ ಇರಲೇಬೇಕು

:-ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ)

ಪ್ರತಿಯೊಬ್ಬ ವ್ಯಕ್ತಿಯ ವಿಕಾಸಕ್ಕೆ ಓರ್ವ ಗುರು ಮತ್ತು ಗುರಿ ಇರಲೇಬೇಕು. ಗುರಿಯಿಲ್ಲದಿದ್ದರೂ ಗುರಿತೋರಿಸುವ ಗುರು ಇರಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಇಂದು ಸರ್ವಪಲ್ಲಿ ಡಾ ರಾಧಾಕೃಷ್ಣ ಅವರ ಜನ್ಮದಿನೋತ್ಸವದ ಅಂಗವಾಗಿ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಶಿಕ್ಷಕರ ವೃತ್ತಿ ಪವಿತ್ರ ವೃತ್ತಿಯಾಗಿದ್ದು, ತಂದೆ ತಾಯಿಯ ನಂತರ ಪೂಜ್ಯನೀಯ ಸ್ಥಾನವನ್ನು ಶಿಕ್ಷಕರಿಗೆ ನೀಡಲಾಗಿದೆ ಎಂದರು.

ಸಮಾನತೆ, ಸಾಮಾಜಿಕ ನ್ಯಾಯ, ಸಹಬಾಳ್ವೆ, ಭಾತೃತ್ವ ಸಮಾಜದಲ್ಲಿ ಇರಲೇಬೇಕು. ಈ ಅವಕಾಶಗಳು ಸಮಾಜದ ಪ್ರತಿಯೊಬ್ಬ ವ್ಯಕ್ತಿಗೂ ದೊರಕಬೇಕು. ಇಂತಹ ವ್ಯಕ್ತಿತ್ವ ರೂಪಿಸುವ ಶಕ್ತಿ ಪ್ರತಿಯೊಬ್ಬ ಶಿಕ್ಷಕರಲ್ಲಿ ಇರಬೇಕು ಎಂದು ತಿಳಿಸಿದರು.

ಸನ್ನಡತೆಯುಳ್ಳಂತಹ ಯುವ ಜನಾಂಗವನ್ನು ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದ ಅವರು ಬದುಕಿಗೆ ಸ್ಪಂದಿಸುವಂತಹ ಶಿಕ್ಷಣ ಇಂದು ಅತ್ಯಂತ ಅವಶ್ಯಕ ಇಂತಹ ಶಿಕ್ಷಣ ನೀಡುವ ಶಿಕ್ಷಕರು ನೀವಾಗಬೇಕು. ಎಲ್ಲರಿಗೂ ಪ್ರೇರಣೆಯಾಗುವಂತಹ ಶಿಕ್ಷಕರು ನೀವಾಗಬೇಕು ಇಂದು ಮುಖ್ಯಮಂತ್ರಿಗಳು ಶಿಕ್ಷಕರಿಗೆ ಕರೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಯ ಗ್ರಾಮೀಣ ಪ್ರದೇಶದ ಮಕ್ಕಳು ಉತ್ತಮ ಫಲಿತಾಂಶವನ್ನು ಪಡೆಯುತ್ತಿದ್ದಾರೆ. ಆದರೆ ದುರಾದೃಷ್ಟವಶಾತ್ ಇಂದಿಗೂ ಸಹ ಪೋಷಕರಲ್ಲಿ ತಮ್ಮ ಮಕ್ಕಳನ್ನು ಖಾಸಗಿ ಆಂಗ್ಲ ಶಾಲೆಗಳಿಗೆ ಸೇರಿಸುವ ವ್ಯಾಮೋಹ ಹೆಚ್ಚುತ್ತಿದೆ. ಇಂಗ್ಲೀಷ್‌ನ್ನು ಒಂದು ಭಾಷೆಯನ್ನಾಗಿ ಕಲಿಯಬೇಕು, ಆದರೆ ಶಾಲೆಗಳಲ್ಲಿ ಕನ್ನಡ ಭಾಷೆ ಮಾಧ್ಯಮವಾಗಬೇಕು. ಪರಿಸ್ಥಿತಿ ಹೀಗಿದ್ದರೂ ಸಹ 48 ಲಕ್ಷ ಮಕ್ಕಳು ಸರ್ಕಾರಿ ಶಾಲೆಗಳಲ್ಲಿ ಓದುತ್ತಿದ್ದು, 12 ಲಕ್ಷ ಮಕ್ಕಳು ಅನುದಾನಿತ ಶಾಲೆಗಳಲ್ಲಿ ಓದುತ್ತಿರುವುದು ಸಮಾಧಾನಕರವಾಗಿದೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸರ್ಕಾರವು ಉಚಿತ ಸಮವಸ್ತ್ರ, ಪಠ್ಯಪುಸ್ತಕ, ಬಿಸಿಯೂಟ, ಹಾಲು-ಮೊಟ್ಟೆ ಹಾಗೂ ಸೈಕಲ್ ಇತ್ಯಾದಿಗಳನ್ನು ನೀಡಲಾಗುತ್ತಿದ್ದು, ಸರ್ಕಾರಿ ಶಾಲೆಗಳಲ್ಲಿ ಮಕ್ಕಳನ್ನು ಓದಿಸುವ ಭಾವನೆ ಪೋಷಕರಲ್ಲಿ ಮೂಡಬೇಕು ಜೊತೆಗೆ ಶಿಕ್ಷಕರು ಮಕ್ಕಳೊಂದಿಗೆ ಭಾವನಾತ್ಮಕ ಸಂಬಂಧ ಬೆಳೆಸಿಕೊಳ್ಳಬೇಕು ಆಗ ಮಾತ್ರ ಶಿಕ್ಷಣಕ್ಕೆ ಸಂಪೂರ್ಣ ಅರ್ಥ ದೊರೆತಂತಾಗುತ್ತದೆ ಎಂದರು.

ಶಿಕ್ಷಕ, ಶಿಕ್ಷಕರಾಗಿ ಮಾತ್ರವಲ್ಲ ವಿದ್ಯಾರ್ಥಿಯೂ ಆದಾಗ ಮಾತ್ರ ಶಿಕ್ಷಕರಲ್ಲಿ ಅಧ್ಯಯನಶೀಲತೆ ನಿರಂತರವಾಗಿರುತ್ತದೆ ಎಂದರು.

ಸರ್ಕಾರಿ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಶಿಕ್ಷಕರ ವೃತ್ತಿಪರ ಅಭಿವೃದ್ಧಿಗಾಗಿ ಗುರುಚೇತನ ಕಾರ್ಯಕ್ರಮ ಇಂದಿನಿಂದ ಜಾರಿಗೊಳ್ಳಲಿದ್ದು, ಈ ಕಾರ್ಯಕ್ರಮದಡಿ 50 ಸಾವಿರ ಶಿಕ್ಷಕರಿಗೆ 10 ದಿನಗಳ ತರಬೇತಿಯನ್ನು ನೀಡಲಾಗುವುದು ಎಂದ ಅವರು ಈ ಕಾರ್ಯಕ್ರಮದಡಿ ಶಿಕ್ಷಕರು ತಮ್ಮ ಆಸಕ್ತಿದಾಯಕ ವಿಷಯವನ್ನು ಆಯ್ಕೆ ಮಾಡಿಕೊಂಡು ತರಬೇತಿ ಪಡೆಯುವ ಮೂಲಕ ಜ್ಞಾನವಿಕಾಸ ಹೊಂದಬಹುದಾಗಿದ್ದು, ತನ್ಮೂಲಕ ಮಕ್ಕಳ ವಿಕಾಸಕ್ಕೆ ಅಣಿಯಾಗಬಹುದಾಗಿದೆ ಎಂದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಾದ ತನ್ವೀರ್ ಸೇಠ್ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಸೆಕ್ಯೂರ್ ಪರೀಕ್ಷಾ ವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ ಶಾಲಾ–ಕಾಲೇಜುಗಳ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲಾಗುತ್ತಿದೆ ಎಂದ ಅವರು, ಶಿಕ್ಷಣ ಇಲಾಖೆಗೆ ಹೊಸ ಕಾಯಕಲ್ಪ ನೀಡುವ ಕೆಲಸವೂ ಸಹ ಆರಂಭವಾಗಿದೆ ಎಂದರು.

ಈಗಾಗಲೇ 7905 ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕ ಪೂರ್ಣಗೊಂಡಿದ್ದು, ಪ್ರಸಕ್ತ ಸಾಲಿನಲ್ಲಿ 10 ಸಾವಿರ ಶಿಕ್ಷಕರ ನೇಮಕಕ್ಕೆ ಅಧಿಸೂಚನೆ ಹೊರಡಿಸಲಾಗಿದೆ ಎಂದರು. ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರುಗಳ ಶಾಲೆಗಳಿಗೆ 2.50ಲಕ್ಷ ರೂ.ಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದ್ದು, ಈ ಮೊತ್ತವನ್ನು ಶಾಲಾಭಿವೃದ್ಧಿಗೆ ವಿನಿಯೋಗಿಸಬಹುದಾಗಿದೆ ಎಂದರು. ಯಾವುದೇ ಕಾರಣಕ್ಕೂ ಶಾಲಾ–ಕಾಲೇಜುಗಳನ್ನು ಮುಚ್ಚುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಗುರುಚೇತನ ಕಾರ್ಯಕ್ರಮವನ್ನು ಉದ್ಘಾಟಿಸಿ ಲಾಂಛನ ಹಾಗೂ ತರಬೇತಿ ಸಾಹಿತ್ಯವನ್ನು ಬಿಡುಗಡೆ ಮಾಡಿದರು. ಈ ಸಂದರ್ಭ ಗಣನೀಯ ಸೇವೆ ಸಲ್ಲಿಸಿದ ಉತ್ತಮ ಶಿಕ್ಷಕರಿಗೆ ರಾಜ್ಯಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಸಚಿವ ಕೆ.ಜೆ.ಜಾರ್ಜ್, ಮೇಲ್ಮನೆ ಸದಸ್ಯರಾದ ರಾಮಚಂದ್ರಗೌಡ, ಶರವಣ, ಪುಟ್ಟಣ, ಶರಣಪ್ಪ ಮಟ್ಟೂರು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಜಯ್ ಸೇಠ್, ಸಾ.ಶಿ.ಇ. ಆಯುಕ್ತರಾದ ಶ್ರೀಮತಿ ಸೌಜನ್ಯ, ಪದವಿಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕಿ ಶ್ರೀಮತಿ ಶಿಖಾ, ಜಿಲ್ಲಾಧಿಕಾರಿ ವಿ. ಶಂಕರ್ ಹಾಗೂ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಎಂಆರ್‌ಎಂ:ಪಿಕೆ

ಸಂಖ್ಯೆ 22/148

# ಬೆಂಗಳೂರು ಜಿಲ್ಲೆಯ ರಂಗಕರ್ಮಿಗಳ ಮಾಹಿತಿ ಸಂಗ್ರಹಕ್ಕೆ ಆಹ್ವಾನ

**ಬೆಂಗಳೂರು ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ)**

ಕರ್ನಾಟಕ ನಾಟಕ ಅಕಾಡೆಮಿ ಹಮ್ಮಿಕೊಂಡಿರುವ ಜಿಲ್ಲಾವಾರು ರಂಗಮಾಹಿತಿ ಮಾಲಿಕೆಯ ಪುಸ್ತಕ ಪ್ರಕಟಣೆಗಾಗಿ ಬೆಂಗಳೂರು ಜಿಲ್ಲಾ ವ್ಯಾಪ್ತಿಯ ರಂಗಾಸಕ್ತರು, ರಂಗಕರ್ಮಿಗಳು ಮತ್ತು ತಂಡಗಳು ತಮ್ಮ ವಿವರಗಳನ್ನು, ಛಾಯಾಚಿತ್ರಗಳನ್ನು, ಹಳೆಯ ಛಾಯಾಚಿತ್ರ, ಭಿತ್ತಿಪತ್ರ ಮುಂತಾದ ದಾಖಾಲಾತಿಗಳನ್ನು ಮೂಲರೂಪದಲ್ಲಿ ಅಥವಾ ಸ್ಕ್ಯಾನ್ಡ್ ಪ್ರತಿಗಳನ್ನು ವಿವರಗಳೊಂದಿಗೆ ಅಕಾಡೆಮಿ ರಿಜಿಸ್ಟ್ರಾರ್ ಅವರಿಗೆ ಸೆಪ್ಟೆಂಬರ್ 30 ರೊಳಗೆ ತಲುಪಿಸುವಂತೆ ಅಕಾಡೆಮಿ ಕೋರಿದೆ.

ಕರ್ನಾಟಕ ನಾಟಕ ಅಕಾಡೆಮಿ ಹಮ್ಮಿಕೊಂಡಿರುವ ಜಿಲ್ಲಾವಾರು ರಂಗಮಾಹಿತಿ ಮಾಲಿಕೆಯ ಪುಸ್ತಕ ಪ್ರಕಟಣೆಗಳು ಈಗಾಗಲೇ ಇಪ್ಪತ್ತೊಂದು ಜಿಲ್ಲೆಗಳ ಚಟುವಟಿಕೆಗಳನ್ನು ಪುಸ್ತಕ ರೂಪದಲ್ಲಿ ಹೊರತಂದಿದೆ. ಇನ್ನು ಉಳಿದ ಒಂಭತ್ತು ಜಿಲ್ಲೆಗಳ ಸಂಗ್ರಹಕಾರ್ಯ ವಿವಿಧ ಹಂತಗಳಲ್ಲಿವೆ.

ಬೆಂಗಳೂರು ಜಿಲ್ಲೆಯ ಚಟುವಟಿಕೆಗಳ ವ್ಯಾಪ್ತಿ ಬಹಳ ಬೃಹತ್ತಾದುದು. ಹೀಗಾಗಿ ಎಲ್ಲಾ ತಂಡಗಳನ್ನು, ರಂಗಕರ್ಮಿಗಳನ್ನು ಸಂಪರ್ಕಿಸುವುದು ಕಷ್ಟಸಾಧ್ಯವಾದ ಕೆಲಸ.

ದಾಖಲೀಕರಣದ ದೃಷ್ಟಿಯಿಂದ ಅತ್ಯಂತ ಉಪಯುಕ್ತವಾಗಿರುವ ಈ ಯೋಜನೆಗೆ ಎಲ್ಲಾ ರಂಗತಂಡಗಳು ತಮ್ಮ ಹಾಗೂ ತಮಗೆ ತಿಳಿದಿರುವ ರಂಗಕರ್ಮಿಗಳ ವಿವರಗಳನ್ನು ಅಕಾಡೆಮಿಗೆ ನೀಡಿದಲ್ಲಿ, ಬೆಂಗಳೂರು ಜಿಲ್ಲೆಯ ಬೃಹತ್ ಗ್ರಂಥದಲ್ಲಿ ಅಡಕ ಮಾಡಲು ಸಾಧ್ಯವಾಗಬಹುದು ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ರಿಜಿಸ್ಟ್ರಾರ್, ಕರ್ನಾಟಕ ನಾಟಕ ಅಕಾಡೆಮಿ, ಕನ್ನಡಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002, ದೂ: 080 – 22237484. ಇ–ಮೇಲ್ ವಿಳಾಸ – academy.nataka@gmail.com. ಮೂಲಕ ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 23/149

# "ಮಹಾತ್ಮಗಾಂಧಿ ಸೇವಾ ಪ್ರಶಸ್ತಿ – ಕರ್ನಾಟಕ"

# ನಾಮನಿರ್ದೇಶನಗಳಿಗೆ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ರಾಜ್ಯ ಸರ್ಕಾರ ಸ್ಥಾಪಿಸಿರುವ "ಮಹಾತ್ಮಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕ" ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಆಯ್ಕೆ ಮಾಡಲು ವ್ಯಕ್ತಿ ಅಥವಾ ಸಂಘ ಸಂಸ್ಥೆಗಳಿಂದ ನಾಮನಿರ್ದೇಶನ ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ

ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯು ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡಿದೆ. 2017 ಅಕ್ಟೋಬರ್ 02 ರ ಗಾಂಧಿ ಜಯಂತಿಯಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮ ಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಾರ ಸೇರಿದಂತೆ ಸಾಮಾಜಿಕ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ವ್ಯಕ್ತಿಗಳು ಅಥವಾ ಸಂಘ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಶಿಫಾರಸ್ಸನ್ನು ಮಾಡಬಹುದಾಗಿದೆ.

ಈ ಸಾಲಿನ ಪ್ರಶಸ್ತಿ ಆಯ್ಕೆಗಾಗಿ ರಾಜ್ಯ ಉಚ್ಛ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಶ್ರೀ ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಹಿರಿಯ ಪತ್ರಕರ್ತ ಹಾಗೂ ಗಾಂಧೀವಾದಿ ಶ್ರೀ ಖಾದ್ರಿ ಅಚ್ಯುತನ್, ಗಾಂಧೀ ಸ್ಮಾರಕ ನಿಧಿ ಉಪಾಧ್ಯಕ್ಷ ಪ್ರೊ. ಜಿ. ಬಿ. ಶಿವರಾಜ್, ಸಮಾಜಶಾಸ್ತ್ರ ನಿವೃತ್ತ ಪ್ರಾಧ್ಯಾಪಕಿ ಪ್ರೊ. ವಸಂತಮ್ಮ ಅವರು ಸದಸ್ಯರಾಗಿದ್ದಾರೆ. , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ನಾಮನಿರ್ದೇಶನಗಳನ್ನು ಸಲ್ಲಿಸಲು ಸೆಪ್ಟೆಂಬರ್ 13 ಕೊನೆಯ ದಿನವಾಗಿದ್ದು ಅಗತ್ಯ ವಿವರಗಳೊಂದಿಗೆ ನಾಮ ನಿರ್ದೇಶನವನ್ನು ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಇವರಿಗೆ ದಿನಾಂಕ : 13-09-2017 ರೊಳಗೆ ಸಲ್ಲಿಸತಕ್ಕದ್ದು. ಇ-ಮೇಲ್ **vartheinfohub@gmail.com** ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಎಂಎಸ್:ಜೆಡಿ:ಜಿಪಿಆರ್.

ಸಂಖ್ಯೆ 24/150

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ನಿರ್ದೇಶನಾಲಯದಲ್ಲಿನ ಮಹಾನಗರಪಾಲಿಕೆಗಳಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರು 119=20 (ಹೈ.ಕ) ಹುದ್ದೆಗಳಿಗೆ ಆಯೋಗದ ಅಂತರ್ಜಾಲದಲ್ಲಿ ಸೆಪ್ಟೆಂಬರ್ 1 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ. ಪ್ರಕಟಿಸಲಾದ ದಿನಾಂಕದಿಂದ 7 ದಿನಗಳೊಳಗಾಗಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಂಎಸ್:ಜೆಡಿ:ಜಿಪಿಆರ್.

**25/151**

# ರಾಜ್ಯ ಮಾಹಿತಿ ಆಯೋಗದ ಮುಖ್ಯ ಮಾಹಿತಿ ಆಯುಕ್ತರಾಗಿ ಡಾ. ಸುಚೇತನ ಸ್ವರೂಪ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, ಸೆಪ್ಟೆಂಬರ್ 5 ( ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನ ಮುಖ್ಯ ಮಾಹಿತಿ ಆಯುಕ್ತರಾಗಿ ಡಾ. ಸುಚೇತನ ಸ್ವರೂಪ ಅವರು ಇಂದು ಪ್ರಮಾಣ ವಚನ ಸ್ವೀಕರಿಸಿದರು.

ರಾಜಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಶ್ರೀ ವಜುಭಾಯಿ ವಾಲಾ ಅವರು ಪ್ರಮಾಣ ವಚನ ಬೋಧಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರು ನಗರ ಅಭಿವೃದ್ಧಿ ಸಚಿವ ಶ್ರೀ ಕೆ.ಜೆ. ಜಾರ್ಜ್, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಸುಭಾಷ್ ಚಂದ್ರ ಕುಂಟಿಆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಕಾರ್ಯದರ್ಶಿ ಡಾ. ಇ.ವಿ. ರಮಣರೆಡ್ಡಿ, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಡಾ. ಎಲ್.ಕೆ. ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಜನಸ್ಪಂದನ) ಪರಮೇಶ್ ಪಾಂಡೆ, ಮಾಹಿತಿ ಆಯುಕ್ತರಾಗಿರುವ ಎಲ್. ಕೃಷ್ಣಮೂರ್ತಿ, ಎನ್.ಪಿ. ರಮೇಶ್, ಕೆ.ಎಂ. ಚಂದ್ರೇಗೌಡ, ವಿಜಯಕುಮಾರ್, ಮಾಜಿ ಮುಖ್ಯ ಮಾಹಿತಿ ಆಯುಕ್ತರುಗಳಾದ ಕೆ.ಕೆ. ಮಿಶ್ರಾ, ಎ.ಕೆ.ಎಂ. ನಾಯಕ್, ತಂಗರಾಜು, ಮಾಜಿ ಮಾಹಿತಿ ಆಯುಕ್ತರುಗಳಾದ ತಿಪ್ಪೇಸ್ವಾಮಿ, ಪೂಜಾರ, ವಿರೂಪಾಕ್ಷಯ್ಯ, ಶಂಕರಪಾಟೀಲ್, ರಾಮಾನಾಯಕ್ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

**26/152**

# ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿ

ಬೆಂಗಳೂರು, ಸೆಪ್ಟೆಂಬರ್ 5 ( ಕರ್ನಾಟಕ ವಾರ್ತೆ) :

**ಕರ್ನಾಟಕ ಲೋಕಸೇವಾ ಆಯೋಗವು 2017 ನೇ ಸಾಲಿನ ರಾಜ್ಯ ಸಿವಿಲ್ ಸೇವೆಗಳಡಿಯ ವಿವಿಧ ಇಲಾಖೆಗಳಲ್ಲಿನ 507 ಪ್ರಥಮ ದರ್ಜೆ ಸಹಾಯಕರ ಮತ್ತು 551 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 1-9-2017 ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ದಿನಾಂಕ 1-9-2017 ರಿಂದ 7-10-2017 ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದು.**

ಶುಲ್ಕ ಪಾವತಿಸಲು ಕೊನೆಯ ದಿನಾಂಕ 9-10-2017 ಆಗಿರುತ್ತದೆ. ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ **http://kpsc.kar.nic.in/Notification** ನ್ನು ನೋಡಬಹುದು ಎಂದು ಪ್ರಕಟಣೆ ತಿಳಿಸಿದೆ.

**27/153**

# ಅವಧಿ ಮುಕ್ತಾಯವಾಗುವ ಗ್ರಾಮಪಂಚಾಯತಿಗಳಿಗೆ ಚುನಾವಣೆ

ಬೆಂಗಳೂರು, ಸೆಪ್ಟೆಂಬರ್ 5 ( ಕರ್ನಾಟಕ ವಾರ್ತೆ) :

2017 ರ ಅಕ್ಟೋಬರ್ ಮತ್ತು ಡಿಸೆಂಬರ್ ಮಾಹೆಯಲ್ಲಿ ಅವಧಿ ಮುಕ್ತಾಯವಾಗುವ ಗ್ರಾಮಪಂಚಾಯತಿಗಳಿಗೆ ಸಾರ್ವತ್ರಿಕ ಚುನಾವಣೆಯನ್ನು ಮತ್ತು ಉಡುಪಿ ಜಿಲ್ಲೆ-ತಾಲ್ಲೂಕಿನ ವಿಸರ್ಜಿತ ಶಿರಿಯಾರ ಗ್ರಾಮ ಪಂಚಾಯತಿಗೆ ಉಪ ಚುನಾವಣೆಯನ್ನು ನಡೆಸಲು ರಾಜ್ಯ ಚುನಾವಣಾ ಆಯೋಗವು ವೇಳಾ ಪಟ್ಟಿಯನ್ನು ಪ್ರಕಟಿಸಿದೆ.

ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕಿನ ಗಂಜಿಹಾಳ ಗ್ರಾಮ ಪಂಚಾಯತಿಯ ಒಟ್ಟು 10 ಸ್ಥಾನಗಳು, ಬೀದರ್ ಜಿಲ್ಲೆ-ತಾಲ್ಲೂಕಿನ ಅಷ್ಟೂರ ಗ್ರಾಮ ಪಂಚಾಯತಿಯ ಒಟ್ಟು 18 ಸ್ಥಾನಗಳು, ಯದಲಾಪುರ ಗ್ರಾಮಪಂಚಾಯತಿಯ 21 ಸ್ಥಾನಗಳು, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಗ್ರಾಮ ಪಂಚಾಯತಿಗಳಾದ ಮಲ್ಲೂರ 17, ಹೊಸೂರ 20, ಬಡ್ಲಿ 9 ಮತ್ತು ಯಕ್ಕುಂಡಿ ಒಟ್ಟು 22 ಸ್ಥಾನಗಳು ಹಾಗೂ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಜಲಲಾಪುರ ಗ್ರಾಮ ಪಂಚಾಯತಿಯ ಒಟ್ಟು 12 ಸ್ಥಾನಗಳು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಮುತ್ಸಂದ್ರ ಗ್ರಾಮ ಪಂಚಾಯತಿಯ ಒಟ್ಟು 23 ಸ್ಥಾನಗಳು, ಹಾವೇರಿ ಜಿಲ್ಲೆಯ ರಾಣೆಬೆನ್ನೂರ ತಾಲ್ಲೂಕಿನ ಬಿಲ್ಲಳ್ಳಿಯ ಗ್ರಾಮ ಪಂಚಾಯತಿಯ ಒಟ್ಟು 17 ಹಾಗೂ ಬ್ಯಾಡಗಿ ತಾಲ್ಲೂಕಿನ ಕೆರವಡಿ ಗ್ರಾಮ ಪಂಚಾಯತಿಯ ಒಟ್ಟು 17 ಸ್ಥಾನಗಳು.

ವಿಸರ್ಜಿತ ಗ್ರಾಮಪಂಚಾಯತಿ: ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ಶಿರಿಯಾರ ಗ್ರಾಮ ಪಂಚಾಯತಿಯ ಒಟ್ಟು 13 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ಚುನಾವಣಾ ವೇಳಾಪಟ್ಟಿ:

ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆ ಹೊರಡಿಸುವ ದಿನಾಂಕ ಮತ್ತು ದಿನ 11-9-2017 (ಸೋಮವಾರ), ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ 14-9-2017 (ಗುರುವಾರ), ಪರಿಶೀಲನೆ 15-9-2017 (ಗುರುವಾರ), ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕೊನೆ ದಿನ 18-9-2017 (ಸೋಮವಾರ), ಮತದಾನ ಅವಶ್ಯವಿದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ 24-9-2017 ಬೆಳಿಗ್ಗೆ 7 ರಿಂದ ಸಂಜೆ 5-00 ಗಂಟೆವರೆಗೆ, ಮರು ಮತದಾನ ಅವಶ್ಯವಿದ್ದರೆ ಮತದಾನ

ನಡೆಸಬೇಕಾದ ದಿನಾಂಕ: 26–9–2017(ಮಂಗಳವಾರ), ಮತದಾನ ಎಣಿಕೆ ದಿನಾಂಕ 27–9–2017 ಬುಧವಾರ ಬೆಳಿಗ್ಗೆ 8–00 ಗಂಟೆಯಿಂದ (ತಾಲ್ಲೂಕು ಕೇಂದ್ರಗಳಲ್ಲಿ) ಚುನಾವಣೆ ಮುಕ್ತಾಯ ದಿನ 27–9–2017.

ಈ ಚುನಾವಣೆಗಳಲ್ಲಿ ಇ.ಸಿ.ಐ.ಎಲ್. ಹೈದರಾಬಾದ್ ಅವರು ತಯಾರಿಸಿರುವ ಮಲ್ಟಿಚಾಯ್ಸ್ ವಿದ್ಯುನ್ಮಾನ ಮತ ಯಂತ್ರದ ಇ.ವಿ.ಎಂ. ಮೂಲಕ ಚುನಾವಣೆ ನಡೆಸಲು ಹಾಗೂ ಪ್ರಥಮಬಾರಿಗೆ ಮೈಸೂರು ಪೇಯಿಂಟ್ಸ್ ಹಾಗೂ ವಾರ್ನಿಷ್ ಲಿ. ಅವರು ತಯಾರಿಸಿರುವ "ಇಂಡೆಲಬಲ್ ಮಾರ್ಕರ್ ಪೆನ್" ನಲ್ಲಿ ಮತದಾರರ ಬೆರಳಿಗೆ ಅಳಿಸಲಾಗದ ಶಾಯಿಯನ್ನು ಹಾಕುವಂತೆ ಆದೇಶಿಸಿದೆ.

ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 11 ರಿಂದ ಸೆಪ್ಟೆಂಬರ್ 27 ರವರೆಗೆ ಜಾರಿಯಲ್ಲಿರುತ್ತದೆ ಎಂದು ರಾಜ್ಯ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.